# ರಾಯಭಾರಿ ರಶ್ಮಿಕಾ



**ಕೆಲವು** ತಿಂಗಳ ಹಿಂದಷ್ಟೆ ನಟಿ ರಶ್ಮಿಕಾ ಮಂದಣ್ಣ ಅವರ 'ಡೀಪ್ ಫೇಕ್' ವಿಡಿಯೊವೊಂದು ವೈರಲ್ ಆಗಿತ್ತು. ಬೇರೊಬ್ಬರ ದೇಹಕ್ಕೆ ರಶ್ಮಿಕಾ ಮುಖ ಬದಲಿಸಿ ಮಾಡಿದ್ದ ಈ ವಿಡಿಯೊ ವಿರುದ್ಧ ದೂರು ಕೂಡ ದಾಖಲಾಗಿತ್ತು. ಇದಾದ ನಂತರ ಹಲವು ನಟ–ನಟಿಯರ ಡೀಪ್ ಫೇಕ್ ವಿಡಿಯೊಗಳು ಸಾಮಾಜಿಕ ಜಾಲತಾಣಗಳ ಅಂಗಳದಲ್ಲಿ ಹರಿದಾಡಲು ಆರಂಭಿಸಿದವು.

ಈ ಬೆನ್ನಲ್ಲೇ ಸೈಬರ್ ಅಪರಾಧಗಳ ಕುರಿತ ಮಾತುಗಳು ಹೆಚ್ಚಾಗಿ ಕೇಳಿಬಂದಿದ್ದವು. ರಶ್ಮಿಕಾ ಮಂದಣ್ಣ ಕೂಡ ಸೈಬರ್ ಕ್ರೈಂ ವಿರುದ್ಧ ಮಾತನಾಡಿದ್ದರು. ಇದೀಗ ರಶ್ಮಿಕಾ ಮಂದಣ್ಣ ಅವರನ್ನೇ ಸರ್ಕಾರ 'ಸೈಬರ್ ಅಪರಾಧ ಸಮನ್ವಯ ಕೇಂದ್ರ'ದ (Indian cyber crime coordination center) ರಾಷ್ಟ್ರೀಯ ರಾಯಭಾರಿಯನ್ನಾಗಿ ನೇಮಕ ಮಾಡಿದೆ. ಕೇಂದ್ರ ಗೃಹ ಸಚಿವಾಲಯದ ಸೈಬರ್ ದೋಸ್ತ್ ಇಲಾಖೆ ಅಧಿಕೃತವಾಗಿ ಇದನ್ನು ಪ್ರಕಟಿಸಿದೆ. ಈ ಕುರಿತ ವಿಡಿಯೊವನ್ನು ರಶ್ಮಿಕಾ ಅವರೂ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ವಿಡಿಯೊದಲ್ಲಿ ಸೈಬರ್ ಅಪರಾಧದ ಬಗ್ಗೆ ಮಾತನಾಡಿರುವ ರಶ್ಮಿಕಾ, 'ನಾವೆಲ್ಲಾ ಡಿಜಿಟಲ್ ಯುಗದಲ್ಲಿದ್ದೇವೆ. ಸೈಬರ್ ಅಪರಾಧದ ಪ್ರಕರಣಗಳು ಕೂಡ ಹೆಚ್ಚಾಗುತ್ತಿವೆ. ಇದರ ಪರಿಣಾಮವನ್ನು ಅನುಭವಿಸಿದ, ಜೊತೆಗೆ ಈ ಡಿಜಿಟಲ್ ಜಗತ್ತಿನಲ್ಲಿರುವ ಯಾರೇ ಆದರೂ, ತಮ್ಮ ಖಾಸಗಿತನದ ರಕ್ಷಣೆಗೆ ಕಠಿಣ ಕ್ರಮ ತೆಗೆದುಕೊಳ್ಳುವ ಸಮಯ ಇದಾಗಿದೆ' ಎಂದು ಹೇಳಿದ್ದಾರೆ.

'ನಮಗೆ ಹಾಗೂ ಮುಂದಿನ ಪೀಳಿಗೆಗೆ ಸುರಕ್ಷಿತ ಸೈಬರ್‌ಸ್ಪೇಸ್ ರೂಪಿಸಿಕೊಳ್ಳಲು ನಾವೆಲ್ಲರೂ ಒಂದಾಗಬೇಕಿದೆ. ಈ ಕುರಿತು ಜಾಗೃತಿ ಮೂಡಿಸಲೆಂದೇ ನಾನು 14ಸಿಗೆ ಬ್ರ್ಯಾಂಡ್ ಅಂಬಾಸಿಡರ್ ಆಗಿದ್ದೇನೆ. ಸೈಬರ್ ಕ್ರೈಂನಿಂದ ನಮ್ಮನ್ನು ಸುರಕ್ಷಿತವಾಗಿಸಿಕೊಳ್ಳಲು ಸದಾ ಪ್ರಯತ್ನಿಸಬೇಕಿದೆ' ಎಂದು ಹೇಳಿದ್ದಾರೆ. 1930ಗೆ ಅಥವಾ cybercrime.gov.in ಸಂಪರ್ಕಿಸುವ ಮೂಲಕ ಸೈಬರ್ ಕ್ರೈಂಗೆ ರಿಪೋರ್ಟ್ ಮಾಡಿ ಎಂದು ಸಲಹೆ ನೀಡಿದ್ದಾರೆ.



# 'ಯುವ'ಗೆ ರೋಹಿತ್ ಸಾಥ್



'ಯುವ' ಸಿನಿಮಾ ಮೂಲಕ ಚಂದನವನಕ್ಕೆ ಎಂಟ್ರಿ ಕೊಟ್ಟಿದ್ದ ನಟ ಯುವ ರಾಜ್‌ಕುಮಾರ್ ಎರಡನೇ ಸಿನಿಮಾ ಘೋಷಣೆಯಾಗಿದ್ದು, ರೋಹಿತ್ ಪದಕಿ ಆ್ಯಕ್ಷನ್–ಕಟ್ ಹೇಳುತ್ತಿರುವುದು ವಿಶೇಷವಾಗಿದೆ.

'ರತ್ನನ್ ಪ್ರಪಂಚ' ಖ್ಯಾತಿಯ ರೋಹಿತ್ ಪದಕಿ ಸದ್ಯ ಧನಂಜಯ್ ನಟನೆಯ 'ಉತ್ತರಕಾಂಡ' ಸಿನಿಮಾದಲ್ಲಿ ತೊಡಗಿಸಿಕೊಂಡಿದ್ದಾರೆ. ಈ ನಡುವೆ ಯುವ ರಾಜ್‌ಕುಮಾರ್‌ಗೂ ನಿರ್ದೇಶನ ಮಾಡಲಿರುವುದಾಗಿ ತಿಳಿಸಿದ್ದಾರೆ. ಈ ಸಿನಿಮಾದ ಕಥೆಯೂ ರೋಹಿತ್ ಪದಕಿ ಅವರದ್ದಾಗಿದೆ.

ಯುವ ರಾಜ್‌ಕುಮಾರ್ ಎರಡನೇ ಸಿನಿಮಾವನ್ನು ಪಿ.ಆರ್.ಕೆ. ಪ್ರೊಡಕ್ಷನ್ಸ್, ಜಯಣ್ಣ ಫಿಲಂಸ್ ಮತ್ತು ಕೆ.ಆರ್.ಜಿ. ಸ್ಟುಡಿಯೊಸ್ ಜಂಟಿಯಾಗಿ ನಿರ್ಮಾಣ ಮಾಡಲಿದೆ. ಇದೇ ಮೊದಲ ಬಾರಿಗೆ ಮೂರು ನಿರ್ಮಾಣ ಸಂಸ್ಥೆಗಳು ಜೊತೆಗೂಡಿ ಕನ್ನಡ ಸಿನಿಮಾವೊಂದನ್ನು ನಿರ್ಮಾಣ ಮಾಡುತ್ತಿವೆ.

ಕನ್ನಡ ರಾಜ್ಯೋತ್ಸವದ ದಿನ ಚಿತ್ರದ ಶೀರ್ಷಿಕೆ ಹಾಗೂ ಫಸ್ಟ್‌ಲುಕ್ ಬಿಡುಗಡೆ ಮಾಡುವುದಾಗಿ ಚಿತ್ರತಂಡ ಘೋಷಿಸಿದೆ. ಚಿತ್ರದ ತಾರಾಬಳಗದ ಮಾಹಿತಿಯನ್ನೂ ಶೀಘ್ರದಲ್ಲೇ ನೀಡಲಾಗುವುದು ಎಂದು ಕೆ.ಆರ್.ಜಿ. ಸ್ಟುಡಿಯೊಸ್ ತಿಳಿಸಿದೆ.